ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ:ಉನಿ:ಸುಮಪ : 2018–19 ದಿನಾಂಕ: 24–10–2018

## ಮಾನವೀಯತೆ ಮರೆತು ಪ್ರಬುದ್ಧ ಭಾರತ ನಿರ್ಮಾಣಕ್ಕೆ ಅಸಾಧ್ಯ–ಸಚಿವ ಪ್ರಿಯಾಂಕ ಖರ್ಗೆ

ಬೆಂಗಳೂರು, 6.24; ಸಮಾಜದಲ್ಲಿ ಆರ್ಥಿಕ ಸಮಾನತೆ ತರಲು ಹಾಗೂ ನವ ಕರ್ನಾಟಕ ನಿರ್ಮಾಣಕ್ಕೆ ನಮ್ಮ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದು ಸಮಾಜ ಕಲ್ಯಾಣ ಸಚಿವರಾದ ಪ್ರಿಯಾಂಕ ಖರ್ಗೆ ಅವರು ತಿಳಿಸಿದರು.

ಕರ್ನಾಟಕ ಸರ್ಕಾರ, ಪತಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಇಂದು ಏರ್ಪಡಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಪ್ರಿಯಾಂಕ ಖರ್ಗೆ ಅವರು ನಮ್ಮ ಸರ್ಕಾರ ಕೊಟ್ಟ ಮಾತಿನಂತೆ ರೈತರ ಸಾಲಮನ್ನಾ ಮಾಡಲಾಗಿದೆ. ಶ್ರೀ ಮಹರ್ಷಿ ವಾಲ್ಮೀಕಿ ಅವರ ರಾಮಾಯಣ ಮಹಾಕಾವ್ಯದ ಸ್ಪೂರ್ತಿಯಿಂದ ನಮ್ಮ ಮೈತ್ರಿ ಸರ್ಕಾರ ಜನಪರ ಆಡಳಿತ ನೀಡುತ್ತಿದೆ ಎಂದು ಮಾತನಾಡಿದರು.

ಮಾನವೀಯತೆ ಮರೆತು ಪ್ರಬುದ್ಧ ಭಾರತ ನಿರ್ಮಾಣ ಮಾಡಲು ಸಾಧ್ಯವಿಲ್ಲ ಎಂದು ಮಾತನಾಡಿದ ಸಚಿವರು ಸಮಾಜದ ಎಲ್ಲಾ ವರ್ಗದ ಜನರನ್ನು ಮುಖ್ಯವಾಹಿನಿಗೆ ತರುವುದು ನಮ್ಮ ಸರ್ಕಾರದ ಪ್ರಮುಖ ಉದ್ದೇಶ. ಅಲ್ಲದೆ ದುಡಿಯುವ ಕೈಗಳನ್ನು ಬಲಪಡಿಸಲು ನಮ್ಮ ಸರ್ಕಾರ ವಿವಿಧ ಜನಪರ ಯೋಜನೆಗಳನ್ನು ಹಮ್ಮಿಕೊಂಡು ಅನುಷ್ಠಾನಕ್ಕೆ ತರುತ್ತಿದೆ ಎಂದು ಸಚಿವರು ತಿಳಿಸಿದರು.

ಧಾರ್ಮಿಕ ಸಂದೇಶ, ಸಾಮಾಜಿಕ ಮೌಲ್ಯಗಳು, ಜನಪ್ರತಿನಿಧಿಗಳು ಹೇಗಿರಬೇಕು ಎಂಬ ಮಾರ್ಗಸೂಚಿಗಳು ರಾಮಾಯಣದಲ್ಲಿವೆ. ಆ ಮಾರ್ಗಸೂಚಿಗಳನ್ನು ಪೂರ್ಣ ಪ್ರಮಾಣದಲ್ಲಿ ಅಳವಡಿಸಿಕೊಳ್ಳಲು ಇನ್ನೂ ಸಾಧ್ಯವಾಗಿಲ್ಲ ಎಂದು ಮಾತನಾಡಿದ ಸಮಾಜ ಕಲ್ಯಾಣ ಸಚಿವರು ಅದಕ್ಕೆ ಇಚ್ಛಾಶಕ್ತಿಯ ಕೊರತೆ ಇದೆ ಎಂದು ಅಭಿಪ್ರಾಯ ಪಟ್ಟರು.

ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ ಮಹಾನ್ ವ್ಯಕ್ತಿಗಳನ್ನು ಸಮಾಜ ಸುಧಾರಕರನ್ನು ಒಂದೊಂದು ಸಮಾಜಕ್ಕೆ ಸೀಮಿತ ಮಾಡಿದ್ದೇವೆ. ಇದು ಸರಿಯಲ್ಲ. ಈ ಎಲ್ಲಾ ಮಹನೀಯರಿಗೆ ಇತಿಹಾಸದಲ್ಲಿ ಸಿಗಬೇಕಾದ ಸ್ಥಾನಮಾನ ಸರಿಯಾಗಿ ಸಿಗಲಿಲ್ಲ. ಅದಕ್ಕೆ ಮೊದಲು ನಮ್ಮ ಮನಸ್ಥಿತಿ ಬದಲಾಗಬೇಕು ಎಂದು ಮಾತನಾಡಿದ ಸಚಿವ ಪ್ರಿಯಾಂಕ ಖರ್ಗೆ ಅವರು ಮಾಜಿ ಪ್ರಧಾನಮಂತ್ರಿ ಹೆಚ್.ಡಿ. ದೇವೇಗೌಡ ಅವರು ವಾಲ್ಮೀಕಿ ಸಮುದಾಯಕ್ಕೆ ಎಲ್ಲಾ ರೀತಿಯ ನೆರವು, ಸಹಕಾರ ಆ ಸಮಾಜದ ಅಭಿವೃದ್ಧಿಗಾಗಿ ಶ್ರಮಿಸಿದ್ದಾರೆ. ಅದನ್ನು ಮನಗಂಡು ಆಯ್ಕೆ ಸಮಿತಿ ಈ ಬಾರಿಯ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಿದೆ ಎಂದು ತಿಳಿಸಿದರು.

ಜಗತ್ತಿನ ಎಲ್ಲಾ ಜೀವರಾಶಿಗಳಿಗೆ ನ್ಯಾಯ ಒದಗಿಸುವ ಕೆಲಸ ಆದಲ್ಲಿ ನಮ್ಮದು ರಾಮರಾಜ್ಯವಾಗುತ್ತದೆ ಎಂದು ಶ್ರೀ ಮಹರ್ಷಿ ವಾಲ್ಮೀಕಿ ಆಯ್ಕೆ ಸಮಿತಿಯ ಅಧ್ಯಕ್ಷರು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ಶ್ರೀ ಹೆಚ್.ಎನ್. ನಾಗಮೋಹನ್ ದಾಸ್ ರವರು ಜಗತ್ತಿನಲ್ಲಿ ಅನೇಕ ಕ್ರಾಂತಿಗಳು ನಡೆದಿದೆ. ಅದರಲ್ಲಿ ಪುಸ್ತಕಗಳಿಂದ ಹೊರಬಂದ ಕ್ರಾಂತಿಗಳೇ ಹೆಚ್ಚು. ಅಂತಹ ಕೃತಿಗಳಲ್ಲಿ ಮಹಾಕಾವ್ಯ, ರಾಮಾಯಣವು ಒಂದು. ಆ ಕಾವ್ಯವನ್ನು ರಚಿಸಿದವರು ಶ್ರೀ ಮಹರ್ಷಿ ವಾಲ್ಮೀಕಿ ಎಂದು ಸ್ಮರಿಸಿದರು.

ಪ್ರಶಸ್ತಿಗಳನ್ನು ಜಾತೀಕರಣ ಮಾಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟ ಅವರು ಆಯಾ ಸಮಾಜದ ಪ್ರಶಸ್ತಿಗಳನ್ನು ಅದೇ ಸಮುದಾಯದವರಿಗೆ ನೀಡುವುದನ್ನು ಬಿಟ್ಟು ಬೇರೆ ಸಮಾಜದವರು ಇತರೆ ಸಮುದಾಯಗಳಿಗೆ ನೀಡಿರುವ ಕೊಡುಗೆಗಳನ್ನು ಗುರುತಿಸಿ ಪ್ರಶಸ್ತಿ ನೀಡಿದರೆ ಒಳ್ಳೆಯದು. ಈ ಬಾರಿಯ ಪ್ರಶಸ್ತಿ ವಿಜೇತರಾದ ಮಾಜಿ ಪ್ರಧಾನಮಂತ್ರಿಗಳಾದ ಹೆಚ್.ಡಿ. ದೇವೇಗೌಡ ಅವರು ವಾಲ್ಮೀಕಿ ಸಮುದಾಯಕ್ಕೆ ಅನೇಕ ಕೊಡುಗೆಗಳನ್ನು ನೀಡಿದ್ದಾರೆ. ಅದರಲ್ಲಿ ಪ್ರಮುಖವಾಗಿ ವಾಲ್ಮೀಕಿ ಗುರುಪೀಠ ಸ್ಥಾಪನೆ. ಆ ಸಮಾಜದವರಿಗೆ ಸಚಿವ ಸ್ಥಾನ ನೀಡುವುದು, ಮೀಸಲು ಸೌಲಭ್ಯ ಕಲ್ಪಿಸಲು ದೇವೇಗೌಡ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಹಾಗಾಗಿ ಅವರನ್ನು ಈ ವರ್ಷದ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಯಿತು ಎಂದು ಅವರು ತಿಳಿಸಿದರು.

ಬದಲಾವಣೆ ಮತ್ತು ಪರಿವರ್ತನೆ ತನ್ನದೇ ಆದ ಪ್ರಭಾವವನ್ನು ಸಮಾಜದ ಮೇಲೆ ಬೀರುತ್ತದೆ ಎಂದು ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಮಾತನಾಡಿದ ಹರಿಹರ ತಾಲೂಕು, ರಾಜನಹಳ್ಳಿ ಶ್ರೀ ವಾಲ್ಮೀಕಿ ಗುರುಪೀಠದ ಜಗದ್ಗುರುಗಳಾದ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮೀಜಿಯವರು ಎಲ್ಲಾ ದಾರ್ಶನಿಕರು ಸಮಾಜದ ಒಳಿತಿಗಾಗಿ ಮಾರ್ಗದರ್ಶನ ನೀಡಿದ್ದಾರೆ ಎಂದು ತಿಳಿಸಿದರು.

ಬುಡಕಟ್ಟು ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಮುಂದಾಗಬೇಕು. ಅಲ್ಲದೆ ಪ್ರತ್ಯೇಕ ಸಚಿವಾಲಯವನ್ನು ಪ್ರಾರಂಭಿಸಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದ ಸ್ವಾಮೀಜಿಯವರು ಈ ಸಮಾಜದ ಹಿತಾಸಕ್ತಿ ಕಾಪಾಡಲು ಸರ್ಕಾರ ಇನ್ನು ಹೆಚ್ಚಿನ ಸೌಲಭ್ಯಗಳನ್ನು ನೀಡಬೇಕು.

ಕಾರ್ಯಕ್ರಮಕ್ಕೂ ಮುನ್ನ ಶಾಸಕರ ಭವನದ ಮುಂಭಾಗದಲ್ಲಿರುವ ತಪೋವನದಲ್ಲಿರುವ ಶ್ರೀ ಮಹರ್ಷಿ ವಾಲ್ಮೀಕಿ ಪುತ್ಥಳಿಗೆ ಮಾಜಿ ಪ್ರಧಾನಮಂತ್ರಿಗಳಾದ ಶ್ರೀ ಹೆಚ್.ಡಿ. ದೇವೇಗೌಡ, ಸಮಾಜ ಕಲ್ಯಾಣ ಸಚಿವ ಶ್ರೀ ಪ್ರಿಯಾಂಕ ಖರ್ಗೆ, ಶ್ರೀ ಪ್ರಸನ್ನಾನಂದಪುರಿ ಸ್ವಾಮೀಜಿ ಸೇರಿದಂತೆ ಸಮಾಜದ ಗಣ್ಯರು ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಗಂಗಾರಾಮ್ ಬಡೇರಿಯಾ ಕಾರ್ಯಕ್ರಮದ ಬಗ್ಗೆ ಪ್ರಸ್ತಾವಿಕವಾಗಿ ಮಾತನಾಡಿ ಗಣ್ಯರನ್ನು ಸ್ವಾಗತಿಸಿದರು.

-3

ಬೆಂಗಳೂರು ಬೃಹತ್ ಮಹಾನಗರ ಪಾಲಿಕೆಯ ಮಹಾಪೌರರಾದ ಶ್ರೀಮತಿ ಗಂಗಾಂಬಿಕೆ ಮಲ್ಲಿಕಾರ್ಜುನ, ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ.ಸಿ. ವೇಣುಗೋಪಾಲ್, ಬೆಂಗಳೂರು ಬೃಹತ್ ಮಹಾನಗರ ಪಾಲಿಕೆಯ ಸದಸ್ಯರುಗಳಾದ ಶ್ರೀ ಕೆ. ನರಸಿಂಹ ನಾಯಕ್, ಶ್ರೀಮತಿ ನೇತ್ರ ಪಲ್ಲವಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ ಸಲಹೆಗಾರರಾದ ಶ್ರೀ ಈ. ವೆಂಕಟಯ್ಯ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿರ್ದೇಶಕರಾದ ಶ್ರೀ ಸಂಗಪ್ಪ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಕಾರ್ಯನಿರ್ವಾಹಕ ನಿರ್ದೇಶಕ ಡಾ॥ ನಂದನ್‌ಕುಮಾರ್, ಕರ್ನಾಟಕ ವಾಲ್ಮೀಕಿ ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಟಿ. ರಾಘವೇಂದ್ರ ಸೇರಿದಂತೆ ಹಿರಿಯ ಅಧಿಕಾರಿಗಳು, ಇಲಾಖಾ ಸಿಬ್ಬಂದಿ, ಶ್ರೀ ಮಹರ್ಷಿ ವಾಲ್ಮೀಕಿ ಸಮುದಾಯದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸಮಾರಂಭದಲ್ಲಿ ಹಾಜರಿದ್ದರು.

*************